# ಕರ್ನಾಟಕ ಸರ್ಕಾರದ ನಡವಳಿಗಳು

**ವಿಷಯ:** ಶ್ರೀ ಎಂ.ಹೆಚ್ ಬಳ್ಳಾರಿ, ಪಂಚಾಯಿತಿ ಅಭಿವೃದ್ಧಿ ಅಧಿಕಾರಿ, ಸೊನ್ನ ಗ್ರಾಮ ಪಂಚಾಯಿತಿ, ಬೀಳಗಿ ತಾಲ್ಲೂಕು, ಬಾಗಲಕೋಟೆ ಜಿಲ್ಲೆ ರವರ ವಿರುದ್ಧ ಇಲಾಖಾ ವಿಚಾರಣೆ ನಡೆಸಲು ಮಾನ್ಯ ಉಪಲೋಕಾಯುಕ್ತರಿಗೆ ವಹಿಸುವ ಕುರಿತು.

**ಓದಲಾಗಿದೆ:**

ನಿಬಂಧಕರು, ಕರ್ನಾಟಕ ಲೋಕಾಯುಕ್ತ, ಬೆಂಗಳೂರು ಇವರ ಅ.ಸ.ಪ.ಸಂ. Compt/UPLOK/BGM-2661/2017/ARE-5, ದಿನಾಂಕ: 16.02.2018.

**ಪ್ರಸ್ತಾವನೆ:**

ಮೇಲೆ ಓದಲಾದ ನಿಬಂಧಕರು, ಕರ್ನಾಟಕ ಲೋಕಾಯುಕ್ತ, ಬೆಂಗಳೂರು ಇವರ ಪತ್ರದ ಸಂಗಡ ಕಳುಹಿಸಿರುವ ಮಾನ್ಯ ಉಪಲೋಕಾಯುಕ್ತರು ದಿನಾಂಕ: 14.02.2018 ರಂದು ಕರ್ನಾಟಕ ಲೋಕಾಯುಕ್ತ ಕಾಯ್ದೆ 1984ರ ಕಲಂ 12(3)ರ ಅನ್ವಯ ಸಲ್ಲಿಸಿರುವ ವರದಿಯಲ್ಲಿ ಶ್ರೀ ಶ್ರೀಶೈಲ ಹುಚ್ಚಪ್ಪ ಬರಗುಂಡಿ, ನಾಗರಾಳ, ಬೀಳಗಿ ತಾಲ್ಲೂಕು, ಬಾಗಲಕೋಟೆ ಜಿಲ್ಲೆ (ಇನ್ನು ಮುಂದೆ 'ದೂರುದಾರರು' ಎಂದು ಕರೆಯಲ್ಪಡುತ್ತಾರೆ) ಇವರು 1)ಶ್ರೀ ಎಂ.ಹೆಚ್ ಬಳ್ಳಾರಿ, ಪಂಚಾಯಿತಿ ಅಭಿವೃದ್ಧಿ ಅಧಿಕಾರಿ, ಸೊನ್ನ ಗ್ರಾಮ ಪಂಚಾಯಿತಿ, ಬೀಳಗಿ ತಾಲ್ಲೂಕು, ಬಾಗಲಕೋಟೆ ಜಿಲ್ಲೆ, 2)ಶ್ರೀ ಎಂ.ಎಂ ಹುದ್ದಾರ, ಗ್ರಾಮ ಲೆಕ್ಕಿಗ, ನಾಗರಾಳ ಗ್ರಾಮ, ಬೀಳಗಿ ತಾಲ್ಲೂಕು, ಬಾಗಲಕೋಟೆ ಜಿಲ್ಲೆ, 3)ಶ್ರೀ ಎಲ್ ಕುಲಕರ್ಣಿ, ತಹಶೀಲ್ದಾರರು, ತಾಲ್ಲೂಕು ಕಛೇರಿ, ಬೀಳಗಿ ತಾಲ್ಲೂಕು, ಬಾಗಲಕೋಟೆ ಜಿಲ್ಲೆ (ಇನ್ನು ಮುಂದೆ ಕ್ರಮವಾಗಿ 'ಎದುರುದಾರರು 1, 2 ಮತ್ತು 3' ಎಂದು ಕರೆಯಲ್ಪಡುತ್ತಾರೆ) ಇವರುಗಳ ವಿರುದ್ಧ ದಿನಾಂಕ:13.09.2012 ರಂದು ಆದಾಯ ಪ್ರಮಾಣ ಪತ್ರ ನೀಡಲು ಸಾಧ್ಯವಿಲ್ಲವೆಂದು ಹಿಂಬರಹ ನೀಡಿದ್ದರೂ ದಿನಾಂಕ:12.10.2012 ರಂದು ಆದಾಯ ಪ್ರಮಾಣ ಪತ್ರ ನೀಡಿರುವ ಬಗ್ಗೆ, ಪಿಂಚಣಿ ಪಡೆಯುತ್ತಿರುವ ನಿವೃತ್ತ ಸರ್ಕಾರಿ ನೌಕರರಾದ ಶ್ರೀಮತಿ ಜಯಶ್ರೀ ಕೋಂ ಆನಂದಪ್ಪ ರವರಿಗೆ ಆಶ್ರಯ ಯೋಜನೆಯಡಿ ಮನೆ ಮಂಜೂರು ಮಾಡಿರುವ ಬಗ್ಗೆ, ಶ್ರೀಮಂತ ಮಹಿಳೆಯಾದ ಶ್ರೀಮತಿ ಸುಶೀಲವ್ವ ಕೋಂ ಈರಣ್ಣ ವಾಲಿ ರವರನ್ನು ಆಶ್ರಯ ಯೋಜನೆಯಡಿ ಫಲಾನುಭವಿಯಾಗಿ ಆಯ್ಕೆ ಮಾಡಿರುವ ಬಗ್ಗೆ ನೀಡಿದ ದೂರನ್ನು ಕರ್ನಾಟಕ ಲೋಕಾಯುಕ್ತ ಕಾಯ್ದೆ 1984 ರ ಕಲಂ 9 ರ ಅಡಿಯಲ್ಲಿ ತನಿಖೆಗೆ ತೆಗೆದುಕೊಳ್ಳಲಾಗಿದೆ.

ಎದುರುದಾರರಿಂದ ಆಕ್ಷೇಪಣೆಗಳನ್ನು ಕೋರಲಾಗಿ, 1ನೇ ಎದುರುದಾರರು ಯಾವುದೇ ಆಕ್ಷೇಪಣೆಗಳನ್ನು ಸಲ್ಲಿಸಿರುವುದಿಲ್ಲ. 2 ಮತ್ತು 3ನೇ ಎದುರುದಾರರು ಆದಾಯ ಪ್ರಮಾಣ ಪತ್ರವನ್ನು ತಮ್ಮ ಕಛೇರಿಯಿಂದ ನೀಡಿರುವುದಿಲ್ಲವೆಂದು ಆಕ್ಷೇಪಣೆ ಸಲ್ಲಿಸಿರುತ್ತಾರೆ.

ಆದಾಯ ಪ್ರಮಾಣ ಪತ್ರವನ್ನು ಪರಿಶೀಲಿಸಲಾಗಿ ಸದರಿ ಪ್ರಮಾಣ ಪತ್ರವು ಸುಳ್ಳು ಆದಾಯ ಪ್ರಮಾಣ ಪತ್ರವಾಗಿದ್ದು, ಯಾವುದೇ ಕಛೇರಿಯಿಂದ ನೀಡಲಾಗಿರುವುದಿಲ್ಲ. 1ನೇ ಎದುರುದಾರರಾದ ಶ್ರೀ ಎಂ.ಹೆಚ್ ಬಳ್ಳಾರಿ, ಪಂಚಾಯಿತಿ ಅಭಿವೃದ್ಧಿ ಅಧಿಕಾರಿ, ಸೊನ್ನ ಗ್ರಾಮ ಪಂಚಾಯಿತಿ ರವರು ಆದಾಯ ಪ್ರಮಾಣ ಪತ್ರವನ್ನು ಪರಿಶೀಲಿಸದೆ ಶ್ರೀಮತಿ ಜಯಶ್ರೀ ಕೋಂ ಆನಂದಪ್ಪ ರವರಿಗೆ ಮನೆ ಮಂಜೂರು ಮಾಡಿರುತ್ತಾರೆ.

ತನಿಖಾ ವರದಿಯ ಕಡತದಲ್ಲಿನ ಸಂಗತಿಗಳು ಹಾಗೂ ದಾಖಲಾತಿಗಳಿಂದ ಎದುರುದಾರರಾದ ಶ್ರೀ ಎಂ.ಹೆಚ್ ಬಳ್ಳಾರಿ, ಪಂಚಾಯಿತಿ ಅಭಿವೃದ್ಧಿ ಅಧಿಕಾರಿ, ಸೊನ್ನ ಗ್ರಾಮ ಪಂಚಾಯಿತಿ, ಬೀಳಗಿ ತಾಲ್ಲೂಕು, ಬಾಗಲಕೋಟೆ ಜಿಲ್ಲೆ ರವರು ಕರ್ನಾಟಕ ನಾಗರೀಕ ಸೇವೆ (ನಡತೆ) ನಿಯಮಗಳು 1966 ರ ನಿಯಮ 3(1) ರನ್ವಯ ದುರ್ನಡತೆ ಎಸಗಿರುವುದು ಮೇಲ್ನೋಟಕ್ಕೆ ಕಂಡು ಬಂದಿರುವ ಹಿನ್ನೆಲೆಯಲ್ಲಿ ಸದರಿ ನೌಕರರ ವಿರುದ್ಧ ಶಿಸ್ತು ನಡವಳಿಕೆ ಜರುಗಿಸಲು ಹಾಗೂ ಕರ್ನಾಟಕ ನಾಗರೀಕ ಸೇವಾ (ವರ್ಗೀಕರಣ, ನಿರ್ಬಂಧ ಮತ್ತು ಮೇಲ್ಮನವಿ) ನಿಯಮಗಳು 1957 ರ ನಿಯಮ 14(ಎ) ರಡಿಯಲ್ಲಿ ಇಲಾಖಾ ವಿಚಾರಣೆ ನಡೆಸಲು ಲೋಕಾಯುಕ್ತ ಪ್ರಾಧಿಕಾರಕ್ಕೆ ಒಪ್ಪಿಸುವಂತೆ ಕರ್ನಾಟಕ ಲೋಕಾಯುಕ್ತ ಕಾಯ್ದೆಯ ಕಲಂ 12(3) ರನ್ವಯ ಪ್ರದತ್ತವಾದ ಅಧಿಕಾರದಡಿ ಶಿಫಾರಸ್ಸು ಮಾಡಿರುತ್ತಾರೆ.

ಸರ್ಕಾರವು ಮಾನ್ಯ ಉಪಲೋಕಾಯುಕ್ತರ ವರದಿಯನ್ನು ಪರಿಶೀಲಿಸಿ, ಶ್ರೀ ಎಂ.ಹೆಚ್ ಬಳ್ಳಾರಿ, ಪಂಚಾಯಿತಿ ಅಭಿವೃದ್ಧಿ ಅಧಿಕಾರಿ, ಸೊನ್ನ ಗ್ರಾಮ ಪಂಚಾಯಿತಿ, ಬೀಳಗಿ ತಾಲ್ಲೂಕು, ಬಾಗಲಕೋಟೆ ಜಿಲ್ಲೆ ಇವರ ವಿರುದ್ಧ ವಿಚಾರಣೆ ನಡೆಸುವುದು ಸೂಕ್ತವೆಂದು ಭಾವಿಸಿ ಕರ್ನಾಟಕ ನಾಗರೀಕ ಸೇವಾ (ವರ್ಗೀಕರಣ, ನಿಯಂತ್ರಣ ಮತ್ತು ಮೇಲ್ಮನವಿ) ನಿಯಮಗಳು, 1957ರ ನಿಯಮ 14–ಎ ರನ್ವಯ ಪ್ರಕರಣವನ್ನು ಮಾನ್ಯ ಉಪಲೋಕಾಯುಕ್ತರಿಗೆ ವಹಿಸುವ ಸಲುವಾಗಿ ಈ ಕೆಳಕಂಡಂತೆ ಆದೇಶಿಸಿದೆ.

.....2

**ಸರ್ಕಾರದ ಆದೇಶ ಸಂಖ್ಯೆ: ಗ್ರಾಅಪ 88 ಗ್ರಾಪಂಕಾ 2018, ಬೆಂಗಳೂರು, ದಿನಾಂಕ: 08.03.2018**

ಪ್ರಸ್ತಾವನೆಯಲ್ಲಿ ವಿವರಿಸಲಾದ ಅಂಶಗಳ ಹಿನ್ನೆಲೆಯಲ್ಲಿ, ಶ್ರೀ ಎಂ.ಹೆಚ್ ಬಳ್ಳಾರಿ, ಪಂಚಾಯಿತಿ ಅಭಿವೃದ್ಧಿ ಅಧಿಕಾರಿ, ಸೊನ್ನ ಗ್ರಾಮ ಪಂಚಾಯಿತಿ, ಬೀಳಗಿ ತಾಲ್ಲೂಕು, ಬಾಗಲಕೋಟೆ ಜಿಲ್ಲೆ ಇವರ ವಿರುದ್ಧ ಕರ್ನಾಟಕ ನಾಗರೀಕ ಸೇವಾ (ವರ್ಗೀಕರಣ, ನಿಯಂತ್ರಣ ಮತ್ತು ಮೇಲ್ಮನವಿ) ನಿಯಮಗಳು 1957 ರ ನಿಯಮ 11 ರ ಅನುಸಾರ ಇಲಾಖಾ ವಿಚಾರಣೆ ನಡೆಸಲು ಸದರಿ ನಿಯಮಗಳ ನಿಯಮ 14-ಎ ಅಡಿ ಮಾನ್ಯ ಉಪಲೋಕಾಯುಕ್ತರಿಗೆ ವಹಿಸಿದೆ.

ಈ ಪ್ರಕರಣದಲ್ಲಿ ಸರ್ಕಾರವು ಶಿಸ್ತು ಪ್ರಾಧಿಕಾರವಾಗಿದ್ದು, ಆಪಾದಿತರಿಗೆ, ಕರ್ನಾಟಕ ನಾಗರೀಕ ಸೇವಾ (ವರ್ಗೀಕರಣ, ನಿಯಂತ್ರಣ ಮತ್ತು ಮೇಲ್ಮನವಿ) ನಿಯಮಗಳು 1957ರ ನಿಯಮ-8 ರ ಅಡಿ ಸೂಚಿತವಾದ ಯಾವುದಾದರೊಂದು ಅಥವಾ ಹೆಚ್ಚಿನ ದಂಡನೆ ವಿಧಿಸಲು ಸಕ್ಷಮ ಪ್ರಾಧಿಕಾರವಾಗಿರುತ್ತದೆ.

ಕರ್ನಾಟಕ ರಾಜ್ಯಪಾಲರ ಆಜ್ಞಾನುಸಾರ
ಮತ್ತು ಅವರ ಹೆಸರಿನಲ್ಲಿ,

9/3

(ಮುಬಾರಕ್ ಅಹ್ಮದ್)
ಉಪನಿರ್ದೇಶಕರು ಹಾಗೂ ಪದನಿಮಿತ್ತ
ಸರ್ಕಾರದ ಅಧೀನ ಕಾರ್ಯದರ್ಶಿ,
ಗ್ರಾಮೀಣಾಭಿವೃದ್ಧಿ ಮತ್ತು ಪಂ.ರಾಜ್ ಇಲಾಖೆ.

ಗೆ,

1. ಮಹಾಲೇಖಪಾಲರು, ಕರ್ನಾಟಕ ಬೆಂಗಳೂರು.
2. ಮಾನ್ಯ ಉಪಲೋಕಾಯುಕ್ತ ರವರು, ಕರ್ನಾಟಕ ಲೋಕಾಯುಕ್ತ, ಬೆಂಗಳೂರು.
3. ನಿಬಂಧಕರು, ಕರ್ನಾಟಕ ಲೋಕಾಯುಕ್ತ, ಬೆಂಗಳೂರು.
   **(ಮೇಲೆ ಓದಲಾದ ಪತ್ರದಲ್ಲಿ ಸಲ್ಲಿಸಲಾದ ಮೂಲ ದಾಖಲಾತಿಗಳನ್ನು ಪುಟ ಸಂಖ್ಯೆ 1 ರಿಂದ 56 ರವರೆಗೆ ಇದರೊಂದಿಗೆ ಲಗತ್ತಿಸಿ ಕಳುಹಿಸಲಾಗಿದೆ)**
4. ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ, ಬಾಗಲಕೋಟೆ ಜಿಲ್ಲಾ ಪಂಚಾಯತಿ, ಬಾಗಲಕೋಟೆ.
5. ಕಾರ್ಯನಿರ್ವಾಹಕ ಅಧಿಕಾರಿ, ಬೀಳಗಿ ತಾಲ್ಲೂಕು ಪಂಚಾಯತಿ, ಬೀಳಗಿ, ಬಾಗಲಕೋಟೆ ಜಿಲ್ಲೆ. (ಸದರಿ ನೌಕರರಿಗೆ ಈ ಆದೇಶದ ಪ್ರತಿಯನ್ನು ತಲುಪಿಸಿ, ಸರ್ಕಾರಕ್ಕೆ ಸ್ವೀಕೃತಿ ಸಲ್ಲಿಸುವುದು.)
6. ಶ್ರೀ ಎಂ.ಹೆಚ್ ಬಳ್ಳಾರಿ, ಪಂಚಾಯಿತಿ ಅಭಿವೃದ್ಧಿ ಅಧಿಕಾರಿ, ಸೊನ್ನ ಗ್ರಾಮ ಪಂಚಾಯಿತಿ, ಬೀಳಗಿ ತಾಲ್ಲೂಕು, ಬಾಗಲಕೋಟೆ ಜಿಲ್ಲೆ.
7. ಗಣಕಕೋಶ – ಇಲಾಖಾ ವೆಬ್‌ಸೈಟ್‌ನಲ್ಲಿ ಪ್ರಕಟಿಸಲು.
8. ಶಾಖಾ ರಕ್ಷಾ ಕಡತ/ಹೆಚ್ಚುವರಿ ಪ್ರತಿ.